ಕರ್ನಾಟಕ ಸರ್ಕಾರ

ವಾಣಿಜ್ಯ ತೆರಿಗೆ ಇಲಾಖೆ

ಸಂಖ್ಯೆ:ವಾತೆಅಆ(ಜಾರಿ):ದವ:/ಸಿಆರ್. /11-12 ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರ ಕಛೇರಿ,
(ಜಾರಿ) ದಕ್ಷಿಣ ವಲಯ, ಕೋರಮಂಗಲ,
ಬೆಂಗಳೂರು-47, ದಿನಾಂಕ:10-02-2012.

# ಸಾರ್ವಜನಿಕ ಬಹಿರಂಗ ಹರಾಜು ಪ್ರಕಟಣೆ

ವಿಷಯ: ಈ ವಿಭಾಗದಲ್ಲಿರುವ ನಿರುಪಯುಕ್ತ ವಾಹನಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡುವ ಬಗ್ಗೆ.

ಉಲ್ಲೇಖ: 1) ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ (ಕೇಂದ್ರಿಯ) ಕೋರಮಂಗಲ, ಬೆಂಗಳೂರು ಇವರ ತಪಾಸನಾ ವರದಿ ದಿ: 24-11-2011 ಮತ್ತು 24-12-2011.

2) ಮಾನ್ಯ ವಾ.ತೆ.ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ಪತ್ರದ ಸಂ.ವಿಹೆಚ್‌ಟಿ.ಸಿಆರ್.8/11-12 ದಿನಾಂಕ 27-12-2011 ಮತ್ತು ದಿನಾಂಕ 12-01-2012.

~ ~ ~

ಸಾರ್ವಜನಿಕ ಮಾಹಿತಿಗಾಗಿ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಉಲ್ಲೇಖ (1) ಮತ್ತು (2)ರ ಆದೇಶದಂತೆ ದಿನಾಂಕ:27-02-2012 ರಂದು ಮಧ್ಯಾಹ್ನ 2-30 ಗಂಟೆಗೆ ಈ ಕಛೇರಿಯ ಈ ಕೆಳಕಂಡ ವಾಹನಗಳು ನಿರುಪಯುಕ್ತವಾಗಿರುವ ಕಾರಣ, ಸಂಬಂಧಿಸಿದ ಅಪರ ಆಯುಕ್ತರು (ಜಾರಿ) ಇವರಿಂದ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ವಿವರಗಳು ಈ ಕೆಳಕಂಡಂತಿರುತ್ತದೆ.

1) ಬಹಿರಂಗ ಹರಾಜು ದಿನಾಂಕ : 27-02-2012

2) ಹರಾಜು ಮಾಡುವ ಸ್ಥಳ : ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಜಾರಿ),
ದಕ್ಷಿಣ ವಲಯ, ವಾಣಿಜ್ಯ ತೆರಿಗೆ ಕಾರ್ಯಾಲಯ-2
ಕೋರಮಂಗಲ, ಬೆಂಗಳೂರು-47

| ಕ್ರ. ಸಂ | ವಾಹನದ ಹೆಸರು | ವಾಹನ ಸಂಖ್ಯೆ | ತಯಾರಿಕೆ ವರ್ಷ | ಇಂಧನ | ಹರಾಜು ಮಾಡಲು ನಿಗದಿಪಡಿಸಿದ ಕನಿಷ್ಠ ಮೌಲ್ಯ |
|---|---|---|---|---|---|
| 1 | ಟೆಂಪೋ ಟ್ರ್ಯಾಕ್ಸ್ | ಕೆಎ 01 ಜಿ 2623 | 1996 | ಡೀಸೆಲ್ | ರೂ.70,000-00 |
| 2 | ಮಹೇಂದ್ರ ಜೀಪ್ | ಕೆಎ 01 ಜಿ 2126 | 1995 | ಡೀಸೆಲ್ | ರೂ.50,000-00 |
| 3 | ಮಾರುತಿ ಜಿಪ್ಸಿ | ಕೆಎ 01 ಜಿ 485 | 1991 | ಪೆಟ್ರೋಲ್ | ರೂ.20,000-00 |
| 4 | ಟಾಟಾ ಸುಮೋ | ಕೆಎ 01 ಜಿ 3036 | 1998 | ಡೀಸೆಲ್ | ರೂ.62,000-00 |

ನಿಬಂಧನೆಗಳು :

1) ಮೇಲೆ ತಿಳಿಸಿರುವ ನಿರುಪಯುಕ್ತ ವಾಹನಗಳನ್ನು ಸಾರ್ವಜನಿಕ ಬಹಿರಂಗ ಹರಾಜು ಮೂಲಕ ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಜಾರಿ), ದಕ್ಷಿಣ ವಲಯ, ಬೆಂಗಳೂರು ಇವರ ಸಮ್ಮುಖದಲ್ಲಿ ಅಥವಾ ಅವರು ನೇಮಿಸಿದ ಅಧಿಕಾರಿಗಳ ಸಮ್ಮುಖದಲ್ಲಿ ನಡೆಸಲಾಗುವುದು.
2) ವಾಹನವನ್ನು ಎಲ್ಲಿ ಹೇಗಿದೆಯೋ ಹಾಗೆ ಬಹಿರಂಗ ಹರಾಜು ನಡೆಸಲಾಗುವುದು.
3) ಈ ಹರಾಜಿನಲ್ಲಿ ಪಾಲ್ಗೊಳ್ಳಬಯಸುವವರು ದಿನಾಂಕ:24-2-2012 ರಂದು ಯಾವ ವಾಹನದ ಸಂಬಂಧ ಹರಾಜಿನಲ್ಲಿ ಪಾಲ್ಗೊಳ್ಳುವವರು ಸದರಿ ವಾಹನದ ಹರಾಜು ಮಾಡಲು ನಿದಗಿಪಡಿಸಿದ ಕನಿಷ್ಠ ಮೌಲ್ಯದ ಶೇ.10 ರಷ್ಟು ಹಣವನ್ನು ಠೇವಣಿ ಮಾಡಿ ರಸೀತಿ ಪಡೆಯತಕ್ಕದ್ದು.
4) ವಾಹನವನ್ನು ಸಂಬಂಧಿಸಿದ ಅಧಿಕಾರಿಗಳಿಂದ ಅನುಮೋದನೆ ಸಿಕ್ಕ ನಂತರ 15 ದಿನಗಳೊಳಗಾಗಿ ಪೂರ್ತಿ ಹಣವನ್ನು ಪಾವತಿ ಮಾಡಿ ನಂತರ ಸ್ವಂತ ಖರ್ಚಿನಲ್ಲಿ ಯಥಾಸ್ಥಿತಿಯಲ್ಲಿ ಹಾಲಿ ಇರುವ ಜಾಗದಿಂದ ಸಾಗಿಸಿಕೊಳ್ಳತಕ್ಕದ್ದು.
5) ವಾಹನವನ್ನು ಪರೀಕ್ಷಿಸಲು ಇಚ್ಛಿಸುವವರು ಈ ಕಛೇರಿಯಲ್ಲಿ ಕೆಲಸದ ದಿನಗಳಲ್ಲಿ ಬೆಳಿಗ್ಗೆ 10-00 ಗಂಟೆಯಿಂದ ಸಂಜೆ 5-30 ಗಂಟೆಯೊಳಗೆ ಪರಿಶೀಲಿಸಬಹುದು.
6) ಹರಾಜಿನಲ್ಲಿ ಹಣ ಕಟ್ಟಿ ಯಶಸ್ವಿ ಆಗದವರಿಗೆ ಕಟ್ಟಿದ ಹಣವನ್ನು ಕೂಡಲೇ ಹಿಂತಿರುಗಿಸ ಲಾಗುವುದು.
7) ಬಹಿರಂಗ ಹರಾಜು ಮುಗಿದ ಮೇಲೆ ಅತೀ ಹೆಚ್ಚು ಬಿಡ್ಡುದಾರರು ಕೂಡಲೇ ಮಾರಾಟದ ಮೊತ್ತ ಹಾಗೂ ತೆರಿಗೆಗಳು ಸೇರಿದಂತೆ ಶೇಕಡ 25 ಭಾಗ ಹಣವನ್ನು ಪಾವತಿ ಮಾಡದೇ ಹೋದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
8) ಉಳಿದ ಶೇಕಡ 75 ಭಾಗ ಹರಾಜಿನ ಹಣವನ್ನು ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ಇವರಿಂದ ಒಪ್ಪಿಗೆ ಪತ್ರ ದೊರೆತ ದಿನಾಂಕದಿಂದ 15 ದಿನಗಳೊಳಗಾಗಿ ಪಾವತಿಸಿ ನಂತರ ತಮ್ಮ ಸ್ವಂತ ಖರ್ಚಿನಲ್ಲಿ ವಾಹನವನ್ನು ಹಾಲಿ ಇರುವ ಜಾಗದಿಂದ ಯಥಾ ಸ್ಥಿತಿಯಲ್ಲಿ ಸಾಗಿಸಿಕೊಳ್ಳತಕ್ಕದ್ದು.

9) ಹರಾಜಿನಲ್ಲಿ ವಿಲೇವಾರಿಯಾದ ವಾಹನವನ್ನು ನಿಗಧಿತ ಅವಧಿಯೊಳಗೆ ಪೂರ್ತಿ ಹಣ ಕಟ್ಟಿ ಸ್ವಾಧೀನಕ್ಕೆ ತೆಗೆದುಕೊಳ್ಳದೇ ಹೋದ ಪಕ್ಷದಲ್ಲಿ ಪ್ರತಿ ದಿನಕ್ಕೆ ರೂ. 50-00 ನೆಲ ಬಾಡಿಗೆ ವಿಧಿಸಲಾಗುವುದು ಮತ್ತು ತಿಂಗಳ ಒಳಗಾಗಿ ಪೂರ್ತಿ ಹಣ ಕಟ್ಟದಿದ್ದರೆ ಕಟ್ಟಿರುವ ಹಣವನ್ನು ಮುಟ್ಟುಗೋಲು ಹಾಕಿಕೊಂಡು ವಾಹನವನ್ನು ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

10) ಇಲಾಖಾ ಸಿಬ್ಬಂದಿಯವರು ಹರಾಜಿನಲ್ಲಿ ಭಾಗವಹಿಸಲು ಅರ್ಹರಲ್ಲ.

11) ಬಹಿರಂಗ ಹರಾಜಿನಲ್ಲಿ ವಾದ ವಿವಾದಗಳಿಗೆ ಅವಕಾಶವಿಲ್ಲ. ಯಾವುದೇ ತಕರಾರುಗಳಿಗೆ, ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಜಾರಿ), ದಕ್ಷಿಣ ವಲಯ, ಬೆಂಗಳೂರು ಇವರ ತೀರ್ಮಾನವೇ ಅಂತಿಮವಾದುದು.

12) ಯಾವುದೇ ಸಂದರ್ಭದಲ್ಲಿಯು ಮಾರಾಟದ ಹರಾಜನ್ನು ಅಂಗೀಕರಿಸುವ, ತಿರಸ್ಕರಿಸುವ, ಮುಂದೂಡುವ, ರದ್ದುಪಡಿಸುವ ಎಲ್ಲಾ ಅಧಿಕಾರ ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಜಾರಿ), ದಕ್ಷಿಣ ವಲಯ, ಬೆಂಗಳೂರು ಇವರಿಗೆ ಸಂಬಂಧಪಟ್ಟಿರುತ್ತದೆ.

10.2.12

ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು (ಜಾರಿ),
ದಕ್ಷಿಣ ವಲಯ, ಬೆಂಗಳೂರು.

ಪ್ರತಿಗಳು :

1) ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ) ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ
2) ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು (ಆಡಳಿತ), ಡಿವಿಜ-1,2,3,4,5,6 ಸದರಿ ಪ್ರಕಟಣೆಯನ್ನು ಸೂಚನಾ ಪಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.
3) ಪ್ರದೇಶಿಕ ಸಾರಿಗೆ ಅಧಿಕಾರಿಗಳು (ಕೇಂದ್ರೀಯ), ಬೆಂಗಳೂರು ಇವರಿಗೆ ಮಾಹಿತಿಗಾಗಿ
4) ಸಾರ್ವಜನಿಕರ ಮಾಹಿಗಿಗಾಗಿ ಸೂಚನಾ ಫಲಕಕ್ಕೆ..
5) ಇಲಾಖಾ ವೆಬ್‌ಸೈಟ್‌ನಲ್ಲಿ ಸದರಿ ಪತ್ರವನ್ನು ಹಾಕಲು, ವಾಣಿಜ್ಯ ತೆರಿಗೆ ಉಪ ಆಯುಕ್ತರು, ಗಣಕ ಕೇಂದ್ರ ಇವರಿಗೆ ಕಳುಹಿಸಲಾಗಿದೆ.
6) ಕಛೇರಿ ಕಡತಕ್ಕೆ.